



ಅರುಣ ಪಿ. ಭಟ್ಟ


## ವಾರಭವಿಷ್ಯ: 09.12.2021ರಿಂದ 15.12.2021




ವಾರದ ಆರಂಭದಲ್ಲಿ ವೃತ್ತಿ ಜೀವನದಲ್ಲಿ ಕೀರ್ತಿ ಪ್ರತಿಷ್ಠೆಗಳು ಲಭಿಸುತ್ತವೆ. ಇನ್ನು ಉದ್ಯೋಗಸ್ಥರಿಗೆ ಜವಾಬ್ದಾರಿ ಹೆಚ್ಚಾಗಲಿದೆ. ವಿದ್ಯಾರ್ಥಿಗಳು ಹೆಚ್ಚು ಜಾಗರೂಕರಾಗಿ ಇರಬೇಕು. ನಿಮ್ಮ ಗುರಿಯಿಂದ ಗಮನ ಬೇರೆಡೆ ಹೋಗದಂತೆ ನೋಡಿಕೊಂಡರೆ ಮಾತ್ರ ಉತ್ತಮ ಫಲಿತಾಂಶ ಸಾಧ್ಯ. ಸಂಬಂಧದ ಪ್ರಾಮುಖ್ಯ ಬಹಳ ಚೆನ್ನಾಗಿ ಅರ್ಥ ಮಾಡಿಕೊಳ್ಳುತ್ತೀರಿ. ಶುಭದಿನ 10. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಾರದ ಆರಂಭದಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಕಡೆಗೆ ನಿಮ್ಮ ಗಮನ ಹೆಚ್ಚಿರುತ್ತದೆ. ತೀರ್ಥಕ್ಷೇತ್ರ ಪ್ರವಾಸ ಮಾಡಬೇಕು ಉನ್ನತ ಶಿಕ್ಷಣ ಮಾಡುತ್ತಿರುವವರಿಗೆ ಉತ್ತಮ ಪ್ರಗತಿ ಇದೆ. ಇನ್ನು ಮಾಮೂಲಿ ಕೆಲಸ ಕಾರ್ಯಗಳ ಹೊರತಾಗಿ ಇತರ ವಿಚಾರಗಳ ಕಡೆಗೆ ನಿಮ್ಮ ಗಮನ ಹೋಗುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವೇತನದಲ್ಲಿ ಏರಿಕೆಯಾಗುವ ಸಾಧ್ಯತೆ ಇದೆ. ಶುಭದಿನ 12. ಸೌಂದರ್ಯ ಲಹರಿ ಪಠಿಸಿರಿ.





ವಾರದ ಆರಂಭದಲ್ಲಿ ಕೌಟುಂಬಿಕ ವಿಚಾರದಲ್ಲಿ ಕೆಲವು ಕಷ್ಟಗಳು ಎದುರಾಗಲಿವೆ. ಈಗಾಗಲೇ ಇರುವ ಸಮಸ್ಯೆಗಳ ಜತೆಗೆ ಇದು ಕೂಡ ಸೇರ್ಪಡೆಯಾಗುತ್ತದೆ. ಆದರೆ ಹೆದರುವ ಅಗತ್ಯ ಇಲ್ಲ. ನಿಮ್ಮ ಪ್ರಯತ್ನ ಭವಿಷ್ಯದ ಯಶಸ್ಸಿಗೆ ಸಹಕಾರಿ ಆಗಿರುತ್ತದೆ. ಸಂಗಾತಿ ಜತೆಗೆ ನಡೆಸುವ ಮಾತುಕತೆ ಉದ್ವಿಗ್ನತೆಗೆ ಕಾರಣವಾಗಬಹುದು. ಆದ್ದರಿಂದ ಎಚ್ಚರಿಕೆಯಿಂದ ವ್ಯವಹರಿಸಬೇಕು. ಶುಭದಿನ 13. ಹನುಮಾನ್ ಚಾಲಿಸ್ ಓದಿರಿ.





ವಾರದ ಆರಂಭದಲ್ಲಿ ವೈವಾಹಿಕ ಜೀವನದಲ್ಲಿ ಸಂತಸ ಇರುತ್ತದೆ. ಸಂಗಾತಿ ಜತೆ ಉತ್ತಮ ಬಾಂಧವ್ಯ ಇರಲಿದೆ. ಉದ್ಯೋಗದಲ್ಲಿ ಯಶಸ್ಸು ಪಡೆಯಲು ಸಾಕಷ್ಟು ಅವಕಾಶಗಳು ದೊರೆಯಲಿವೆ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬ ಸದಸ್ಯರ ನಡವಳಿಕೆಯಿಂದ ಗೊಂದಲಕ್ಕೆ ಸಿಲುಕಿಕೊಳ್ಳುತ್ತೀರಿ. ಇನ್ನು ಆರೋಗ್ಯದಲ್ಲಿ ಕೂಡ ಏರಿಳಿತಗಳು ಕಾಣಿಸಿಕೊಳ್ಳುತ್ತವೆ. ಶುಭದಿನ 10. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ತಂತ್ರಜ್ಞಾನ ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ಇರುವವರಿಗೆ ವಾರದ ಆರಂಭದಲ್ಲಿ ಪ್ರಗತಿ ಇದೆ. ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಸೃಷ್ಟಿಯಾಗಬಹುದು. ಇನ್ನು ಆದ್ಯತೆ ಮೇಲೆ ಕೆಲಸ ಕಾರ್ಯಗಳನ್ನು ಪೂರೈಸುವುದಕ್ಕೆ ನಿರ್ಧಾರ ಮಾಡುತ್ತೀರಿ. ಈ ತೀರ್ಮಾನದಿಂದ ಭವಿಷ್ಯದಲ್ಲಿ ಅನುಕೂಲವಾಗಲಿದೆ. ಆಹಾರ ನೀರು ಸೇವನೆ ಬಗ್ಗೆ ಹೆಚ್ಚು ಲಕ್ಷ್ಯ ಇರಲಿ. ಶುಭದಿನ 12. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ.





ವಿದ್ಯಾರ್ಥಿಗಳಿಗೆ ಶಿಕ್ಷಣದಲ್ಲಿ ಯಶಸ್ಸು ದೊರೆಯಲಿದೆ. ವಾರದ ದ್ವಿತೀಯಾರ್ಧದಲ್ಲಿ ಆದಾಯ ಅತ್ಯುತ್ತಮವಾಗಿ ಇರುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಸಂಗಾತಿ ಜತೆ ಬಾಂಧವ್ಯ ಗಟ್ಟಿಯಾಗಿರುತ್ತದೆ. ಸಂಬಂಧಿಕರ ಆಹ್ವಾನದ ಮೇರೆಗೆ ಶುಭ ಕಾರ್ಯಗಳಲ್ಲಿ ಭಾಗವಹಿಸಲಿದ್ದೀರಿ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ನಿಮ್ಮ ಪರವಾಗಿ ಬೆಳವಣಿಗೆಗಳು ನಡೆಯಲಿವೆ. ಶುಭದಿನ 09. ವಿಷ್ಣು ಸಹಸ್ರನಾಮ ಪಠಿಸಿರಿ.





ಉದ್ಯಮಿಗಳು ವ್ಯಾಪಾರಸ್ಥರಿಗೆ ಉತ್ತಮ ಸಮಯ ಇದು. ಈ ಅವಧಿಯಲ್ಲಿ ಆರೋಗ್ಯವೂ ಉತ್ತಮವಾಗಿರುತ್ತದೆ. ಉದ್ಯೋಗಿಗಳಿಗೆ ದೊರೆಯುತ್ತಿರುವ ಸವಲತ್ತು ಮತ್ತಷ್ಟು ವಿಸ್ತರಣೆಯಾಗಲಿದೆ. ವಾರದ ಮಧ್ಯ ಭಾಗದಲ್ಲಿ ಕೆಲಸ ಕಾರ್ಯಗಳು ವಿಪರೀತ ವೇಗವಾಗಿ ಪೂರ್ಣಗೊಳ್ಳುತ್ತವೆ. ಆದಾಯ ಹೆಚ್ಚು ಮಾಡಿಕೊಳ್ಳುವುದಕ್ಕೂ ಅತ್ಯುತ್ತಮವಾದ ಸಮಯ ಇದು. ಶುಭದಿನ 11. ಲಿಂಗಾಷ್ಟಕ ಪಠಿಸಿರಿ.





ವಾರದ ಶುರುವಿನಲ್ಲಿ ನಿಮ್ಮ ಸಾಮರ್ಥ್ಯ ಹೆಚ್ಚಲಿದೆ. ಕೌಟುಂಬಿಕ ಜೀವನದಲ್ಲೂ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ಸೈನ್ಯ, ಭದ್ರತೆ, ಶಿಕ್ಷಣ ಹಾಗೂ ಆರ್ಥಿಕ ವ್ಯವಹಾರಗಳನ್ನು ನೋಡಿಕೊಳ್ಳುತ್ತಿರುವವರಿಗೆ ಉತ್ತಮ ಪ್ರಗತಿ ಇದೆ. ಮಾಹಿತಿ ಹಾಗೂ ಸಂವಹನ ಕ್ಷೇತ್ರದಲ್ಲಿ ಇರುವವರಿಗೆ ಗೌರವ ಹೆಚ್ಚಾಗಲಿದೆ. ಜತೆಗೆ ಯಶಸ್ಸು ನಿಮ್ಮ ಪಾಲಿಗೆ ಸಿಗಲಿದೆ. ಶುಭದಿನ 10. ಚಂಡಿ ಪಾರಾಯಣ ಮಾಡಿರಿ.





ವಾರದ ಶುರುವಿನಲ್ಲಿ ಭೂಮಿ ಖರೀದಿ ಪ್ರಕ್ರಿಯೆಯಲ್ಲಿ ತೊಡಗಲಿದ್ದೀರಿ. ವಾಸ್ತವದಲ್ಲಿ ಸಂತೋಷ ಪಡಲು ಬೇಕಾದ ಸೌಕರ್ಯ ಪಡೆಯಲಿದ್ದೀರಿ. ವಾರದ ಮಧ್ಯ ಭಾಗದಲ್ಲಿ ಕೆಲವು ಕೆಲಸಗಳನ್ನು ಪೂರ್ಣ ಮಾಡಬೇಕಾದ ಅನಿವಾರ್ಯಕ್ಕೆ ಸಿಲುಕಿಕೊಂಡು ನೀವು ಸ್ವತಃ ಅಖಾಡಕ್ಕೆ ಇಳಿಯಬೇಕಾಗುತ್ತದೆ. ವಾರದ ದ್ವಿತೀಯಾರ್ಧದಲ್ಲಿ ಲಾಭದ ಪ್ರಮಾಣ ಹೆಚ್ಚಾಗಲಿದೆ. ಶುಭದಿನ 09. ಗಣಪತಿ ಸುಬ್ರಮಣ್ಯ ಜಪ ಮಾಡಿರಿ.




ವಾರದ ಶುರುವಿನಲ್ಲಿ ವೃತ್ತಿ ಜೀವನದಲ್ಲಿ ದೊರೆಯುವ ಅವಕಾಶಗಳನ್ನು ಸದ್ಬಳಕೆ ಮಾಡುವ ಕಡೆಗೆ ನಿಮ್ಮ ಗಮನ ಇರುತ್ತದೆ. ನಿಮ್ಮ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯಲಿದೆ. ಆ ಮೂಲಕ ನಿಮ್ಮ ಈಗಿನ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಅನುಕೂಲ ಆಗಲಿದೆ. ಭೂಮಿ ಖರೀದಿ ಬಗ್ಗೆ ಆಸಕ್ತರಾಗಿದ್ದಲ್ಲಿ ನಿಮ್ಮ ಪ್ರಯತ್ನ ಆರಂಭಿಸುವುದಕ್ಕೆ ಇದು ಸೂಕ್ತ ಸಮಯ. ಶುಭದಿನ 13. ನವದುರ್ಗಾ ಆರಾಧನೆ ಮಾಡಿರಿ.




ವಾರದ ಆರಂಭದಲ್ಲಿ ನೀವು ಅಂದುಕೊಂಡ ವಿವಿಧ ಕೆಲಸಗಳನ್ನು ಶುರು ಮಾಡುವುದಕ್ಕೆ ಸೂಕ್ತವಾದ ಸಮಯ. ನಿಮ್ಮ ಪ್ರತಿಭೆಯನ್ನು ಹೆಚ್ಚಿಸಿಕೊಳ್ಳಲು ಅಗತ್ಯವಾದ ವೇದಿಕೆಯನ್ನು ಸಿದ್ಧಮಾಡಿಕೊಳ್ಳುತ್ತೀರಿ. ನಿಮ್ಮ ವಿವೇಚನಾಶಕ್ತಿ ಹಾಗೂ ಧೈರ್ಯ ಅಗಾಧ ಪ್ರಮಾಣದಲ್ಲಿ ಹೆಚ್ಚಲಿದೆ. ನಿಮಗೆ ವಹಿಸಿದ ಜವಾಬ್ದಾರಿಯನ್ನು ಜೋಪಾನವಾಗಿ ನಿರ್ವಹಿಸಿ. ಶುಭದಿನ 10. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ವಾರದ ಶುರುವಿನಲ್ಲಿ ಕೆಲಸ ಕಾರ್ಯಗಳನ್ನು ಪೂರೈಸಲು ಉದ್ಯೋಗ ಸ್ಥಳದಲ್ಲಿ ಶ್ರಮಿಸಲಿದ್ದೀರಿ. ಶ್ರಮಕ್ಕೆ ತಕ್ಕಂತೆ ಫಲಿತಾಂಶ ದೊರೆಯಲಿದೆ. ಪ್ರೀತಿ ಪ್ರೇಮದಲ್ಲಿ ಇರುವವರಿಗೆ ಸಂಗಾತಿ ಜತೆಗಿನ ಬಾಂಧವ್ಯ ಇನ್ನಷ್ಟು ಗಟ್ಟಿಯಾಗಲಿದೆ. ವಾರದ ಮಧ್ಯ ಭಾಗದಲ್ಲಿ ಸಣ್ಣ ಪುಟ್ಟ ವಿಚಾರಗಳಿಗೂ ಬಿಕ್ಕಟ್ಟು ಎದುರಾಗಲಿದೆ. ವೈವಾಹಿಕ ಜೀವನವು ಸಂತುಷ್ಟವಾಗಿರುತ್ತದೆ. ಶುಭದಿನ 12. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.